# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀಮತಿ ಮಾಯಾದೇವಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಮದಕಟ್ಟಿ ಗ್ರಾಮ ಪಂಚಾಯತಿ, ಬಾಲ್ಕಿ ತಾಲ್ಲೂಕು, ಬೀದರ್ ಜಿಲ್ಲೆ, ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14ಎ ಅಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಬಗ್ಗೆ – ಆದೇಶ.

**ಓದಲಾಗಿದೆ:** ಉಪ ನಿಬಂಧಕರು, ವಿಚಾರಣೆಗಳು-3, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಪತ್ರ ಸಂಖ್ಯೆ:ಅ.ಸ.ಪ.ಸಂ.ಕಂಪ್ಲೇಂಟ್/ಉಪಲೋಕ್/ ಜಿಎಲ್‌ಬಿ-772/2013/ಡಿಆರ್‌ಇ-3, ದಿನಾಂಕ:17-08-2016

**ಪ್ರಸ್ತಾವನೆ:**ಮೇಲೆ ಓದಲಾದ ಉಪ ನಿಬಂಧಕರು, ವಿಚಾರಣೆಗಳು-3, ಕರ್ನಾಟಕ ಲೋಕಾಯುಕ್ತ, ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ:04-08-2016 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಶ್ರೀಮತಿ ಮಾಯಾದೇವಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಮದಕಟ್ಟಿ ಗ್ರಾಮ ಪಂಚಾಯತಿ, ಬಾಲ್ಕಿ ತಾಲ್ಲೂಕು, ಬೀದರ್ ಜಿಲ್ಲೆ, ಇಲ್ಲಿ ಕಾರ್ಯನಿರ್ವಹಿಸುತ್ತಿದ್ದಾಗ 2010-11ನೇ ಸಾಲಿನ ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆಯಡಿ ಮದಕಟ್ಟಿ ಗ್ರಾಮದ ಸರ್ವೆ ನಂ50, 120/1 ಮತ್ತು ಎಕಲಾಸಪುರವಾಡಿ ಗ್ರಾಮದ ಸರ್ವೇ ನಂ:34 ರ ಜಮೀನಿನಲ್ಲಿ ಕೃಷಿ ಹೊಂಡ ನಿರ್ಮಾಣ ಕಾಮಗಾರಿಗೆ ಸಂಬಂಧ ಪಟ್ಟಂತೆ ಹಣವನ್ನು ದುರ್ಬಳಕೆ ಮಾಡಿರುತ್ತಾರೆಂದು ದೂರುದಾರರಾದ ಶ್ರೀ ಸತೀಶ್ ಬಾಬುರಾವ್ ಹೆಡೆ, ಎಕಲಾಸಪುರವಾಡಿ ಗ್ರಾಮ, ಬಾಲ್ಕಿ ತಾಲ್ಲೂಕು, ಬೀದರ್ ಜಿಲ್ಲೆ, ಇವರು ಸಲ್ಲಿಸಿದ ದೂರಿನಂತೆ ನಡೆಸಿದ ತನಿಖೆ ಅನುಸಾರ

> "ಶ್ರೀಮತಿ ಮಾಯಾದೇವಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಇವರು ಎಕಲಾಸಪುರವಾಡಿ ಗ್ರಾಮದ ಸರ್ವೆ ನಂ:34 ರಲ್ಲಿ ಕೃಷಿ ಹೊಂಡ ನಿರ್ಮಾಣ ಕಾಮಗಾರಿಗೆ ಸಂಬಂಧಿಸಿದಂತೆ ಕಾಮಗಾರಿ ಅಂದಾಜು ಮೊತ್ತ:24,964/- ಆಗಿದ್ದು, ಹಾಜರಾತಿ ಪಟ್ಟಿಯಲ್ಲಿ ಒಟ್ಟು 16 ಜನ ಕೂಲಿಕಾರರು 11 ದಿನ ಕೆಲಸ ನಿರ್ವಹಿಸಿರುವುದಾಗಿ ತೋರಿಸಿದ್ದು ರೂ.17,600/- ಗಳನ್ನು ಕೂಲಿ ಹಣವಾಗಿ ಕೂಲಿಕಾರರಿಗೆ ವೈಯಕ್ತಿಕವಾಗಿ ನೀಡದೆ ಒಂದೇ ಚೆಕ್ ಮುಖಾಂತರ ಪಾವತಿಸಲಾಗಿರುತ್ತದೆ. ಸಾಮಾಗ್ರಿ ಮೊತ್ತಕ್ಕೆ ಸಂಬಂಧ ಪಟ್ಟಂತೆ ಯಾವ ಸಾಮಾಗ್ರಿಗಳಿಗೆ ವೆಚ್ಚ ಭರಿಸಲಾಗಿದೆ ಮತ್ತು ಸಾಮಾಗ್ರಿ ಮೊತ್ತ ರೂ.7,225/- ಗಳನ್ನು ಯಾರಿಗೇ ಪಾವತಿಸಲಾಗಿದೆ ಎಂಬ ವಿವರಗಳು ಇರುವುದಿಲ್ಲ. ಈ ಮುಖಾಂತರ ಅವ್ಯವಹಾರ ಎಸಗಿದ್ದು ಇವರು ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಕರ್ತವ್ಯಲೋಪವೆಸಗಿದ್ದಾರೆಂದು ಮೇಲ್ನೋಟಕ್ಕೆ ಕಂಡು ಬರುತ್ತದೆ."

ಶ್ರೀಮತಿ ಮಾಯಾದೇವಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಮದಕಟ್ಟಿ ಗ್ರಾಮ ಪಂಚಾಯತಿ, ಬಾಲ್ಕಿ ತಾಲ್ಲೂಕು, ಬೀದರ್ ಜಿಲ್ಲೆ, ಇವರು ತಮ್ಮ ಕರ್ತವ್ಯ ಪಾಲನೆಯಲ್ಲಿ ಸಂಪೂರ್ಣ ಪ್ರಾಮಾಣಿಕತೆ ಹಾಗೂ ನಿಷ್ಠೆ ತೋರದೆ ಮತ್ತು ಸರ್ಕಾರಿ ನೌಕರರಿಗೆ ಉಚಿತವಲ್ಲದ ರೀತಿಯಲ್ಲಿ ನಡೆದುಕೊಂಡು ದುರ್ನಡತೆ/ದುರ್ವತನೆಯಿಂದ ವರ್ತಿಸಿ, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966 ರಡಿಯಲ್ಲಿ ಉಕ್ತವಾದ ದುರ್ನಡತೆ ಎಸಗಿ ಶಿಸ್ತು ಕ್ರಮಕ್ಕೆ ಬಾಧ್ಯರಾಗಿದ್ದಾರೆಂದು ಮೇಲ್ನೋಟಕ್ಕೆ ಕಂಡುಬಂದಿದ್ದರಿಂದ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ನೌಕರರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/545/ಗ್ರಾಪಂಕಾ/2016 ಬೆಂಗಳೂರು, ದಿನಾಂಕ: 26-10-2016.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಶ್ರೀಮತಿ ಮಾಯಾದೇವಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಮದಕಟ್ಟಿ ಗ್ರಾಮ ಪಂಚಾಯತಿ, ಬಾಲ್ಕಿ ತಾಲ್ಲೂಕು, ಬೀದರ್ ಜಿಲ್ಲೆ, ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಾವಳಿಗಳ ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ-8ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ ಅರುಣ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ಉಪ ನಿಬಂಧಕರು, ವಿಚಾರಣೆಗಳು-3, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೀದರ್ ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಬಾಲ್ಕಿ ತಾಲ್ಲೂಕು, ಬೀದರ್ ಜಿಲ್ಲೆ,
6. ಶ್ರೀಮತಿ ಮಾಯಾದೇವಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಮದಕಟ್ಟಿ ಗ್ರಾಮ ಪಂಚಾಯತಿ, ಬಾಲ್ಕಿ ತಾಲ್ಲೂಕು, ಬೀದರ್ ಜಿಲ್ಲೆ.
7. ಗಣಕಕೋಶ, ಗ್ರಾಮೀಣಾಭಿವೃದ್ದಿ ಮತ್ತು ಪಂಚಾಯತ್ ರಾಜ್ ಇಲಾಖೆ, ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಕೋರಿ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.